# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 1994 (2344)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ಎಬಿಎಆರ್‌ಕೆ ಗುರುತಿನ ಚೀಟಿಗಳನ್ನು ವಿತರಿಸುತ್ತಿರುವ ಬಗ್ಗೆ

(ಅ) ಹಾಸನ ಜಿಲ್ಲೆಯಲ್ಲಿ ಕಳೆದ 2 ವರ್ಷಗಳಲ್ಲಿ ಎಬಿಎಆರ್‌ಕೆ ಗುರುತಿನ ಚೀಟಿಗಳನ್ನು ನೀಡುವ ಅಭಿಯಾನವನ್ನು ಆಯೋಜಿಸಲಾಗಿದೆಯೇ; ಹಾಗಿದ್ದಲ್ಲಿ, ಈ ಅಭಿಯಾನದಲ್ಲಿ ಎಷ್ಟು ಜನ ಫಲಾನುಭವಿಗಳನ್ನು ಗುರುತಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಅಭಿಯಾನದಲ್ಲಿ ಗುರುತಿಸಲಾದ ಫಲಾನುಭವಿಗಳಿಗೆ ಗುರುತಿನ ಚೀಟಿಗಳನ್ನು ವಿತರಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಫಲಾನುಭವಿಗಳಿಗೆ ವಿತರಿಸಲಾಗಿದೆ; ಬಾಕಿ ಉಳಿದಿರುವ ಫಲಾನುಭವಿಗಳಿಗೆ ಯಾವ ಕಾಲಮಿತಿಯೊಳಗೆ ವಿತರಿಸಲಾಗುವುದು; (ಫಲಾನುಭವಿಗಳ ವಿವರಗಳೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಎಬಿಎಆರ್‌ಕೆ ಗುರುತಿನ ಚೀಟಿಗಳನ್ನು ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು; ಇದರಡಿ ಫಲಾನುಭವಿಗಳು ಯಾವ ಯಾವ ಚಿಕಿತ್ಸೆಗಳನ್ನು ಎಲ್ಲೆಲ್ಲಿ ಪಡೆಯಬಹುದಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಕೇಂದ್ರ ಮತ್ತು ರಾಜ್ಯ ಸರ್ಕಾರ ಜಾರಿಗೊಳಿಸಿರುವ ಈ ಯೋಜನೆಯನ್ನು ಸಾರ್ವಜನಿಕರಿಗೆ ತಲುಪಿಸುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಗುರುತಿಸಿರುವ ಎಲ್ಲಾ ಫಲಾನುಭವಿಗಳಿಗೆ ಸರಿಯಾದ ಸಮಯಕ್ಕೆ ಇದರ ಪ್ರಯೋಜನ ಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)